# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1311 (1408) |
| ಸದಸ್ಯರ ಹೆಸರು | ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 18.12.2025 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | 2024ರ ಆಗಸ್ಟ್ 27ರಂದು 384 ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗಾಗಿ ನಡೆದ ಪೂರ್ವಭಾವಿ ಪರೀಕ್ಷೆಯನ್ನು ಯಾವ ಕಾರಣಕ್ಕೆ ರದ್ದು ಪಡಿಸಲಾಗಿದೆ; | 2024ರ ಆಗಸ್ಟ್ 27ರಂದು ನಡೆದ 384 ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ಪೂರ್ವಭಾವಿ ಪರೀಕ್ಷೆಯ ಎರಡೂ ಪತ್ರಿಕೆಗಳ ಪ್ರಶ್ನೆಪತ್ರಿಕೆಯಲ್ಲಿ ಸುಮಾರು 57 ಪ್ರಶ್ನೆಗಳ ಭಾಷಾಂತರದಲ್ಲಿ ಲೋಪವುಂಟಾಗಿರುತ್ತದೆಂದು ಅಭ್ಯರ್ಥಿಗಳು ದಿನಾಂಕ:02.09.2024ರಂದು ಫ್ರೀಡಂ ಪಾರ್ಕ್‌ನಲ್ಲಿ ತೀವ್ರವಾಗಿ ಪ್ರತಿಭಟನೆ ನಡೆಸಿದ ಹಿನ್ನೆಲೆಯಲ್ಲಿ, ಸರ್ಕಾರವು ದಿನಾಂಕ: 02.09.2024ರ ಪತ್ರದಲ್ಲಿ ಮುಂದಿನ ಎರಡು ತಿಂಗಳೊಳಗಾಗಿ ಆಯೋಗದಿಂದ ಪೂರ್ವಭಾವಿ ಮರುಪರೀಕ್ಷೆಯನ್ನು ನಡೆಸುವಂತೆ ಆದೇಶಿಸಿದ ಹಿನ್ನೆಲೆಯಲ್ಲಿ, ದಿನಾಂಕ:27.08.2024ರದು ನಡೆದ ಪೂರ್ವಭಾವಿ ಪರೀಕ್ಷೆಯನ್ನು ರದ್ದು ಪಡಿಸಲಾಗಿರುತ್ತದೆ. |
| ಆ | ಕರ್ನಾಟಕ ಲೋಕಸೇವಾ ಆಯೋಗವು ಎರಡನೇ ಬಾರಿಯೂ ತನ್ನ ತಪ್ಪನ್ನು ಸರಿಪಡಿಸಿಕೊಳ್ಳದೆ ಡಿಸೆಂಬರ್ 29 ರಂದು ನಡೆದ ಕೆ.ಎ.ಎಸ್ ಪೂರ್ವಭಾವಿ ಮರು ಪರೀಕ್ಷೆಯ ಪ್ರಶ್ನೆ ಪತ್ರಿಕೆಯಲ್ಲೂ ಸಹ ಭಾಷಾಂತರಗಳು ಲೋಪ ದೋಷಗಳು ಪುನರಾವರ್ತನೆ ಆಗಿದ್ದರಿಂದ ಸುಮಾರು 72000 ಕ್ಕೂ ಹೆಚ್ಚು ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆ ಅನ್ಯಾಯವಾಗಿರುವುದಕ್ಕೆ ಮರು ಪರೀಕ್ಷೆ ಕೋರಿ ಪ್ರತಿಭಟನೆಗಳನ್ನು ನಡೆಸಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ; | ದಿನಾಂಕ:29.12.2024ರಂದು ನಡೆದ ಗೆಜೆಟೆಡ್ ಪ್ರೊಬೇಷನರ್ಸ್ ಪೂರ್ವಭಾವಿ ಮರುಪರೀಕ್ಷೆ ಕುರಿತ ಗೊಂದಲ ಹಾಗೂ ಆಕ್ಷೇಪಣೆಗಳಿಗೆ ಸಂಬಂಧಿಸಿದಂತೆ, ಉತ್ತಮ ಕನ್ನಡ ಭಾಷಾ ಜ್ಞಾನವನ್ನು ಹೊಂದಿರುವ ಹಾಗೂ ಆಯಾ ವಿಷಯಗಳಲ್ಲಿ ಪರಿಣಿತಿ ಹೊಂದಿರುವಂತಹ ಮೂವರು ವಿಷಯ ತಜ್ಞರುಗಳನ್ನೊಳಗೊಂಡ 12 ವಿಷಯಗಳ ವಿಷಯ ತಜ್ಞರುಗಳ ಸಮಿತಿ ರಚಿಸಿ ಅಭಿಪ್ರಾಯ ಪಡೆಯಲಾಗಿದ್ದು, ಕೆಲವು ಪ್ರಶ್ನೆಗಳಲ್ಲಿ ಯಾವುದೇ ಭಾಷಾಂತರ ವ್ಯತ್ಯಾಸವಿರುವುದಿಲ್ಲವೆಂದು, ಕೆಲವು ಪ್ರಶ್ನೆಗಳಲ್ಲಿ ಕಾಗುಣಿತಾಕ್ಷರಗಳ ಮುದ್ರಣ ದೋಷವಿರುವುದಾಗಿಯೂ, ಕೆಲವು ಪ್ರಶ್ನೆಗಳಲ್ಲಿ ವ್ಯತ್ಯಾಸವಿದ್ದರೂ ಸಹ ಪ್ರಶ್ನೆಗಳನ್ನು ಅರ್ಥೈಸಿಕೊಂಡು ಕೀ-ಉತ್ತರವನ್ನು ಗುರುತಿಸಬಹುದಾಗಿದೆ ಎಂದು ತಜ್ಞರುಗಳು ಅಭಿಪ್ರಾಯಿಸಿದ್ದು, ಅದರಂತೆ 5 ಪ್ರಶ್ನೆಗಳಿಗೆ ಕೃಪಾಂಕ ಹಾಗೂ 1 ಪ್ರಶ್ನೆಯ ಕೀ-ಉತ್ತರವನ್ನು ಪರಿಷ್ಕರಿಸಬೇಕೆಂದು ಅಭಿಪ್ರಾಯಿಸಿದ್ದು, ಅದರಂತೆ ಕ್ರಮವಹಿಸಲಾಗಿದೆ. ಇದರಿಂದ ಅಭ್ಯರ್ಥಿಗಳಿಗೆ ಯಾವುದೇ ರೀತಿಯ ಅನ್ಯಾಯವಾಗಿರುವುದಿಲ್ಲ. |
| ಇ | ಬಂದಿದ್ದಲ್ಲಿ ಅನ್ಯಾಯಕ್ಕೊಳಗಾದ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆ ಸರ್ಕಾರ ಹಾಗೂ ಕರ್ನಾಟಕ ಲೋಕಸೇವಾ ಆಯೋಗವು ಯಾವ ರೀತಿ ನ್ಯಾಯ ಒದಗಿಸಿದೆ; | |

| | | |
|---|---|---|
| ಈ | ಪ್ರಸ್ತುತ ಚಾಲ್ತಿಯಲ್ಲಿರುವ ನೇಮಕಾತಿಗೆ ಅರ್ಜಿ ಸಲ್ಲಿಸಿರುವ ಅನ್ಯಾಯಕ್ಕೊಳಗಾದ ವಯೋಮಿತಿ ಮೀರಿರುವ ಎಲ್ಲಾ ಅಭ್ಯರ್ಥಿಗಳಿಗೆ ಮುಂಬರುವ ಹೊಸ ಕೆ.ಎ.ಎಸ್ ನೇಮಕಾತಿಗೆ ಒಂದು ಬಾರಿಯಂತೆ ಮತ್ತೊಮ್ಮೆ ವಯೋಮಿತಿಯನ್ನು ಪರಿಗಣಿಸದೆ ಅರ್ಜಿ ಸಲ್ಲಿಸಲು ಅವಕಾಶ ನೀಡಬಹುದಲ್ಲವೇ; ಆಗಿದ್ದಲ್ಲಿ ಅನ್ಯಾಯಕ್ಕೊಳಗಾದ ಅಭ್ಯರ್ಥಿಗಳಿಗೆ ಸರ್ಕಾರ ಕೈಗೊಳ್ಳಬಹುದಾದ ಕ್ರಮದ ಕುರಿತು ತನ್ನ ನಿಲುವನ್ನು ಸ್ಪಷ್ಟಪಡಿಸುವುದು? | ಪ್ರಸ್ತುತ ಚಾಲನೆಯಲ್ಲಿರುವ 384 ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ, ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 44 ಎಸ್ಎಸ್‌ಸಿ 2024, ದಿನಾಂಕ: 21.06.2024ರಲ್ಲಿ, 2017-18ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿ ಅಧಿಸೂಚನೆಗೆ ಅರ್ಜಿ ಸಲ್ಲಿಸಿದ್ದ ಎಲ್ಲಾ ಅಭ್ಯರ್ಥಿಗಳಿಗೆ ವಯಸ್ಸಿನ ನಿರ್ಬಂಧವಿಲ್ಲದೆ ಒಂದು ಬಾರಿಗೆ ಸೀಮಿತಗೊಳಿಸಿ (as a one-time measure) ಅರ್ಜಿ ಸಲ್ಲಿಸಲು ಹೆಚ್ಚುವರಿ ವಿಶೇಷ ಅವಕಾಶವನ್ನು ನೀಡಲಾಗಿರುತ್ತದೆ<br>ಮುಂದುವರೆದು ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 262 ಸೇಸನಿ 2025 ರಲ್ಲಿ ಆದೇಶ ಹೊರಡಿಸಿದ ದಿನಾಂಕದ ನಂತರ ಮುಂದಿನ ದಿನಾಂಕ ಅಂದರೆ 31-12-2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ 3 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿರುತ್ತದೆ. |

ಸಂಖ್ಯೆ: ಸಿಆಸುಇ 170 ಎಸ್ಎಸ್‌ಸಿ 2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ